# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1121 |
| ಸದಸ್ಯರು ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12.03.2026 |
| ಉತ್ತರಿಸುವ ಸಚಿವರು | : | ಗೃಹ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಅಪ್ರಾಪ್ತ ವಯಸ್ಕರು ಕಾನೂನುಬಾಹಿರವಾಗಿ ವಾಹನ ಚಾಲನೆ ಮಾಡುತ್ತಿರುವ ಪ್ರಕರಣಗಳು ವರ್ಷದಿಂದ ವರ್ಷಕ್ಕೆ ಗಣನೀಯವಾಗಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ಈ ರೀತಿಯ ದಾಖಲಾಗಿರುವ ಪ್ರಕರಣಗಳ ವಿವರವೇನು; (ವರ್ಷವಾರು ಮಾಹಿತಿ ನೀಡುವುದು); | ಬೆಂಗಳೂರು ನಗರ ಸಂಚಾರ ವಿಭಾಗದಲ್ಲಿ ಅಪ್ರಾಪ್ತ ವಯಸ್ಕರು ಮತ್ತು ಅವರಿಗೆ ವಾಹನ ನೀಡುವ ಪೋಷಕರ ವಿರುದ್ಧವೂ ಸಹ ಐ.ಎಂ.ವಿ. ಹಾಗೂ ಬಿ.ಎನ್. ಎಸ್ ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲು ಮಾಡಲಾಗುತ್ತಿದ್ದು, ಕಳೆದ 03 ವರ್ಷಗಳಲ್ಲಿ ದಾಖಲು ಮಾಡಿರುವ ಪ್ರಕರಣಗಳ ವಿವರ ಈ ಕೆಳಕಂಡಂತಿದೆ:- |
| ಇ) | ಅಪ್ರಾಪ್ತರಿಗೆ ವಾಹನ ನೀಡುವ ಪೋಷಕರ ವಿರುದ್ಧ ದಾಖಲಾಗಿರುವ ಪ್ರಕರಣಗಳೆಷ್ಟು ಮತ್ತು ಅವರ ವಿರುದ್ಧ ಕೈಗೊಳ್ಳಲಾಗಿರುವ ಕಾನೂನು ಕ್ರಮಗಳೇನು; | |

| ಅಪ್ರಾಪ್ತ ವಯಸ್ಕರು ಮತ್ತು ಪೋಷಕರು | | |
|---|---|---|
| **ವರ್ಷ** | **ಐ.ಎಂ.ವಿ. ಕಾಯ್ದೆ** | **ಬಿ.ಎನ್. ಎಸ್ ಕಾಯ್ದೆ** |
| **2023** | **95** | **145** |
| **2024** | **197** | **181** |
| **2025** | **414** | **218** |

| | | |
|---|---|---|
| ಈ) | ಅಪ್ರಾಪ್ತರ ವಾಹನ ಚಾಲನೆಯಿಂದ ಸಂಭವಿಸುತ್ತಿರುವ ಅಪಘಾತಗಳನ್ನು ತಡೆಯಲು ಮತ್ತು ಸಂಚಾರ ನಿಯಮಗಳ ಬಗ್ಗೆ ಜಾಗೃತಿ ಮೂಡಿಸಲು ಸರ್ಕಾರ ರೂಪಿಸಿರುವ ವಿಶೇಷ ಕಾರ್ಯಚರಣೆಗಳ ಯೋಜನೆಗಳೇನು ? | **ಅಪಘಾತಗಳನ್ನು ತಡೆಯಲು ಕೈಗೊಂಡಿರುವ ಕ್ರಮಗಳು :**<br>· ಅಪ್ರಾಪ್ತರು ವಾಹನ ಚಾಲನೆಯನ್ನು ತಡಗಟ್ಟಲು ಮತ್ತು ವಾಹನ ಚಲಾಯಿಸುವ ಅಪ್ರಾಪ್ತರ ವಿರುದ್ಧ ಬಿ.ಎನ್.ಎಸ್ ಹಾಗೂ ಐ.ಎಂ.ವಿ. ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲು ಮಾಡಿ ಸವಾರರುಗಳನ್ನು ದಸ್ತಗಿರಿ ಮಾಡಿ ಚಾಲನೆಯಲ್ಲಿ ಭಾಗಿಯಾದ ವಾಹನಗಳನ್ನು ಅಮಾನತ್ತುಗೊಳಿಸಲಾಗುತ್ತಿದೆ.<br>· ಅಪ್ರಾಪ್ತರುಗಳ ವಿರುದ್ಧ ಪ್ರಕರಣಗಳನ್ನು ದಾಖಲು ಮಾಡುವುದರ ಜೊತೆಗೆ ಅವರ ಪೋಷಕರುಗಳ ವಿರುದ್ಧವೂ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುತ್ತಿದೆ.<br>· ಅಪ್ರಾಪ್ತರು ಚಾಲನೆಯಲ್ಲಿ ಭಾಗಿಯಾಗುವ ವಾಹನಗಳ ನೋಂದಣಿ ಪುಸ್ತಕಗಳನ್ನು ರದ್ದುಪಡಿಸಲು ಸಂಬಂಧಪಟ್ಟ ಆರ್.ಟಿ.ಓ. ಕಛೇರಿಗೆ ಶಿಫಾರಸ್ಸುಗಳನ್ನು ಕಳುಹಿಸಲಾಗುತ್ತಿರುತ್ತದೆ.<br>· ಅಪ್ರಾಪ್ತ ವಯಸ್ಕರ ಚಾಲನೆಯನ್ನು ತಡೆಗಟ್ಟುವ ಸಲುವಾಗಿ ಕಾಲಕಾಲಕ್ಕೆ ವಿಶೇಷ ಕಾರ್ಯಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತಿದೆ.<br>· ಅಪ್ರಾಪ್ತರು ಹೆಚ್ಚಾಗಿ ವ್ಹೀಲಿಂಗ್‌ನಲ್ಲಿ ಭಾಗಿಯಾಗುತ್ತಿದ್ದು, ಇದನ್ನು ತಡೆಗಟ್ಟುವ ಸಲುವಾಗಿ ನಿಯಮಿತವಾಗಿ ವ್ಹೀಲಿಂಗ್ ನಡೆಸುವಂತಹ ಸ್ಥಳಗಳನ್ನು ಗುರುತಿಸಿ, ಸದರಿ ಸ್ಥಳಗಳಲ್ಲಿ ಅಗತ್ಯ ಕೋಬ್ರಾ ಸಿಬ್ಬಂದಿಗಳನ್ನು ಗಸ್ತು ಕರ್ತವ್ಯಕ್ಕೆ ನೇಮಿಸುವ ಮೂಲಕ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿರುತ್ತದೆ.<br>· ವ್ಹೀಲಿಂಗ್‌ನಲ್ಲಿ ಭಾಗಿಯಾಗುವ ಅಪ್ರಾಪ್ತ ಸವಾರರುಗಳ ವಿರುದ್ಧ ಕಲಂ 107 ಸಿ.ಆರ್.ಪಿ.ಸಿ. ರೀತ್ಯಾ ಸಂಬಂಧಪಟ್ಟ ವಿಶೇಷ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ರವರ (ಕಾನೂನು ಸುವ್ಯವಸ್ಥೆ ವಿಭಾಗದ ಉಪ ಪೊಲೀಸ್ ಆಯುಕ್ತರು) ಮುಂದೆ ಪಿ.ಎ.ಆರ್. ದಾಖಲಿಸಲಾಗುತ್ತಿದೆ.<br>· ಅಪ್ರಾಪ್ತ ವಯಸ್ಕರ ಸಂಚಾರ ನಿಯಮ ಉಲ್ಲಂಘನೆಯನ್ನು ಹತ್ತಿಕ್ಕಲು ಠಾಣಾ ಮಟ್ಟದಲ್ಲಿ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನೊಳಗೊಂಡ ತಂಡವನ್ನು ರಚಿಸಿ, ಸದರಿ ತಂಡಗಳು ತಮ್ಮ ಠಾಣಾ ವ್ಯಾಪ್ತಿಯಲ್ಲಿ ನಿಗಾ ವಹಿಸುವ ಮೂಲಕ ಸಂಚಾರ ನಿಯಮ ಉಲ್ಲಂಘನೆಯನ್ನು ತಡೆಗಟ್ಟಲು ಕ್ರಮ ಕೈಗೊಂಡಿರುತ್ತದೆ.<br>**ಸಂಚಾರ ನಿಯಮಗಳ ಜಾಗೃತಿ ಮೂಡಿಸಲು ಕೈಗೊಂಡಿರುವ ಕ್ರಮಗಳು:**<br>▪ ಸಂಚಾರ ತರಬೇತಿ ಮತ್ತು ರಸ್ತೆ ಸುರಕ್ಷತಾ ಸಂಸ್ಥೆಯಲ್ಲಿ ಹಾಗೂ ಸಂಚಾರ ನಿರ್ವಹಣಾ ಕೇಂದ್ರಕ್ಕೂ ಸಹ ಭೇಟಿ |

| | | |
|---|---|---|
| | | ನೀಡುವ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಅಪ್ರಾಪ್ತ ಚಾಲನೆಯಿಂದ ಉಂಟಾಗುವ ತೊಂದರೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯವನ್ನು ಮಾಡಲಾಗುತ್ತಿದೆ.<br>▪ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್ ಹಾಗೂ ಎಕ್ಸ್ ನಲ್ಲಿ ಅಪ್ರಾಪ್ತರ ಚಾಲನೆಯಿಂದ ಉಂಟಾಗುವ ತೊಂದರೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯವನ್ನು ಮಾಡಲಾಗುತ್ತಿದೆ.<br>▪ ಎಸ್.ಎ.ಆರ್.ಎಸ್ ಯೋಜನೆಯಡಿಯಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ಸಮಯದಲ್ಲಿ ಅಪ್ರಾಪ್ತ ಚಾಲನೆಯಿಂದ ಉಂಟಾಗುವ ತೊಂದರೆಗಳ ಬಗ್ಗೆ ಶಾಲೆಗಳಿಗೆ ಭೇಟಿ ಕೊಟ್ಟು ತಿಳಿವಳಿಕೆ ನೀಡಲಾಗುತ್ತಿದೆ. |

ಹೆಚ್‌ಡಿ 127 ಎಸ್‌ಎಸ್‌ಟಿ 2026

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು.